**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ</u>**

**<u>ಸಿ.ಸಿ.ನಂಃ 1167/2023</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಬೀರೂರುಪೊಲೀಸರು

-: **ವಿರುದ್ಧ** :-

**<u>ಆರೋಪಿಗಳು :</u>**

1. ಶ್ರೀಮತಿ ಶಮಂತಕಮಣಿ,
ಕೋಂ ಶ್ರೀ ರಾಜೇಶ.ಡಿ.ಜಿ,
27 ವರ್ಷಗಳು,
ವಾಸಃ ಮನಕತ್ತೂರು ಗ್ರಾಮ,
ಬಾಣಾವರ ಹೋಬಳಿ,
ಅರಸೀಕೆರೆ ತಾಲ್ಲೂಕು,
ಹಾಸನ ಜಿಲ್ಲೆ.

2. ಶ್ರೀ ಯತೀಶ್,
ಬಿನ್ ಶ್ರೀ ಲಿಂಗಪ್ಪ,
53 ವರ್ಷ,
ವಾಸಃ ಕೊಟಿಗೇನಹಚ್ಚಿ,
ಕಿಬ್ಬನಹಳ್ಳಿ ಹೋಬಳಿ,
ನಲ್ಲಿಕೆರೆ, ತುಮಕೂರು ಜಿಲ್ಲೆ

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 25.09.2022 ರಂದು ಮಧ್ಯಾಹ್ನ 1.00 ಗಂಟೆಗೆ ಬೀರೂರು ಪೋಲೀಸ್ ಠಾಣಾ ಸರಹದ್ದಿನ ದೊಡ್ಡಬೋಕಿಕೆರೆ ಗ್ರಾಮದ ಚಾಸಾ-2/ ಶ್ರೀಮತಿ ಶಾರದಮ್ಮ ರವರ ಬಾಬ್ತು ಮನೆಯಲ್ಲಿ ಚಾಸಾ-1/ ಶ್ರೀ ಡಿ.ಜಿ.ರಾಜೇಶ್ ಮತ್ತು ಮೂರುವರೆ ವರ್ಷದ ಮಗ ಹೃತ್ವಿಕ್ ಹಾಗೂ ಚಾಸಾ-2 ರವರು ಮನೆಯಲ್ಲಿರುವಾಗ 1 ಮತ್ತು 2 ನೇ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಚಾಸಾ-2 ರವರ ಮನೆಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 448 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ಮತ್ತು 2 ನೇ ಆರೋಪಿಗಳಾದ ನೀವು ಚಾಸಾ-2 ರವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ಮತ್ತು 2 ನೇ ಆರೋಪಿತಗಳಾದ ನೀವು ಕೈಯಿಂದ ಚಾಸಾ-2 ರವರ ಮೈಕೈಗೆ ಮತ್ತು ತಲೆಗೆ ಹೊಡೆದಿರುತ್ತೀರಿ ಮತ್ತು ಅವರುಗಳಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ಮತ್ತು 2 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ
ಆರೋಪಿ 1: Yes
ಆರೋಪಿ 2: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?
ಆರೋಪಿಗಳ ಉತ್ತರಃ
ಆರೋಪಿ 1: Pleaded not guilty and claimed to be tried
ಆರೋಪಿ 2: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 30.08.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿತರ ಸಹಿಃ